# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಕಾರ್ಯದರ್ಶಿ, ವಾರ್ಡ್ ಸಮಿತಿ/ಸಹಾಯಕ ಅಭಿಯಂತರರ ಕಛೇರಿ, ದಯಾನಂದನಗರ ವಾರ್ಡ್-97**

**1ನೇ ಮುಖ್ಯ ರಸ್ತೆ, ಶ್ರೀರಾಂಪುರ ಪೋಲಿಸ್ ಠಾಣೆ ಹಿಂಭಾಗ, ದಯಾನಂದನಗರ**

---

*ಸಂ: ವಾ-97/ವಾ.ಸ/ಸಭಾನಡವಳಿ-04/20-21* *ದಿ:21.11.20*

## ಸಭೆಯ ನಡವಳಿಗಳು

ದಿನಾಂಕ: 21.11.20 ಶನಿವಾರ ಪೂರ್ವಾಹ್ನ 11.00 ಘಂಟೆಗೆ ವಾರ್ಡ್-97 ದಯಾನಂದನಗರದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಶ್ರೀಮತಿ ಅಮೃತ ಸಾಯಿ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಂಚಾಲಕರು ವಾರ್ಡ್-97 ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರಿದರು. ನಂತರ ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಎಲ್ಲಾ ಅದೀಕಾರಿಗಳಿಗೆ ಸಹಾಯಕ ಅಭಿಯಂತರರು ಸಭೆಗೆ ಸ್ವಾಗತ ಕೋರುತ್ತಾ,ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

1. ಶ್ರೀಮತಿ.ಅಮೃತ ಸಾಯಿ, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ ಸಮಿತಿ ಅಧ್ಯಕ್ಷರು.
2. ಶ್ರೀಮತಿ.ಅಮೃತ ಸಾಯಿ, ಕಾರ್ಯದರ್ಶಿ ಹಾಗೂ ಸಂಚಾಲಕರು.
3. ಶ್ರೀ.ಕಿರಣ್ ಕುಮಾರ್.ಹೆಚ್.ಸಿ,ಕಂದಾಯ ಪರೀವೀಕ್ಷಕರು.
4. ಶ್ರೀ.ಪ್ರಕಾಶ್.ವೈ.ವಿ, ಕಿರಿಯ ಅಭಿಯಂತರರು(ಬೆಸ್ಕಾಂ).
5. ಶ್ರೀ.ತೋಪೇಗೌಡ, ಕಂದಾಯ ಪರಿವೀಕ್ಷಕರು(ಬಿ.ಬಿ.ಎಂ.ಪಿ)
6. ಶ್ರೀ.ಎಂ.ಹೆಚ್.ಹೆಗಡೆ, ಪೋಲೀಸ್ ಕಾನ್ಸ್ಟೇಬಲ್(ಟ್ರಾಫಿಕ್ ಪೋಲೀಸ್ ಠಾಣೆ-ಮಲ್ಲೇಶ್ವರಂ)
7. ಶ್ರೀ.ರಾಮಚಂದ್ರ, ಪೋಲೀಸ್ ಕಾನ್ಸ್ಟೇಬಲ್(ಟ್ರಾಫಿಕ್ ಪೋಲೀಸ್ ಠಾಣೆ-ಮಲ್ಲೇಶ್ವರಂ)
8. ಶ್ರೀ.ಮಂಜುನಾಥ್.ಬಿ, ಕಂದಾಯ ಪರೀವೀಕ್ಷಕರು.
9. ಶ್ರೀ.ಎನ್.ವೆಂಕಟೇಶ್. ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ ನಿರ್ವಹಣೆ-ಬಿಬಿಎಂಪಿ)
10. ಶ್ರೀ.ಟಿ.ಆಂಜನೇಯ, ಹಿರಿಯ ಆರೋಗ್ಯ ಪರಿವೀಕ್ಷಕರು(ಆರೋಗ್ಯ-ಬಿಬಿಎಂಪಿ)

## *ಸಭೆಯಲ್ಲಿ ಚರ್ಚಿಸಲಾದ ವಿಷಯಗಳು*

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರು ಸಮುಖದಲ್ಲಿ ವಾರ್ಡ್ ಸಂ:97 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರುತ್ತಾ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಂ ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ

Scanned with CamScanner

ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು

1. ಮಾನ್ಯ ಅಪರ ಆಯುಕ್ತರು(ಆಡಳಿತ) ರವರ ಆದೇಶದಂತೆ ವಾರ್ಡ ನೋಡಲ್ ಅಧಿಕಾರಿಗಳು ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಘನತ್ಯಾಜ್ಯ ನಿರ್ವಹಣೆಯ ವಾಹನ ಹಾಗೂ ಸಿಬ್ಬಂದಿಗಳ ವಿವರಗಳನ್ನು ಸಭೆಯಲ್ಲಿ ತಿಳಿಸುವಂತೆ ಸೂಚಿಸಿದರು. ವಾರ್ಡನ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ವೆಂಕಟೇಶ್ ರವರು ಎಲ್ಲಾ ವಿವರಗಳನ್ನು ಎಲ್ಲರ ಸಮುಖದಲ್ಲಿ ತಿಳಿಸಿದರು.
2. ಹಿಂದಿನ ಸಭೆಯಲ್ಲಿ ತಿಳಿಸಿದ್ದ 6ನೇ ಅಡ್ಡರಸ್ತೆ, ಆರ್.ಜೆ.ಐ ಕಾಲೋನಿಯಲ್ಲಿ ಒಳ ಚರಂಡಿ ಪೈಪ್ ಹಾಳಾಗಿ ಸದರಿ ರಸ್ತೆಯ ಮನೆಹಳ ಸಂಪ್ಗಳಿಗೆ ಸ್ಯಾನಿಟರಿ ನೀರು ಹರಿಯುತ್ತಿರುವ ಬಗ್ಗೆ ತಿಳಿಸಿದರು. ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆಯಿಂದ ಯಾವುದೇ ಅಧಿಕಾರಿಗಳು ಹಾಜರಾಗದ ಕಾರಣ ಸದರಿ ದೂರಿನ ಬಗ್ಗೆ ಯಾವುದೇ ಮಾಹಿತಿ ದೊರೆತಿರುವುದಿಲ್ಲ.
3. ಹಿಂದಿನ ಸಭೆಯಲ್ಲಿ ವಾರ್ಡ ವ್ಯಾಪ್ತಿಯಲ್ಲಿ ಇನ್ನು ಹಲವು ಕಡೆ ಮಣ್ಣು ಇರುವುದಾಗಿ ತಿಳಿಸಿದ್ದು, ಸಹಾಯಕ ಅಭಿಯಂತರರು ಟ್ರ್ಯಾಕ್ಟರ್ ನಲ್ಲಿ ತೆಗೆಸಿರುವುದಾಗಿ ತಿಳಿಸಿದರು.
4. ಶ್ರೀ.ರಾಮಚಂದ್ರ, ಪೋಲೀಸ್ ಕಾನ್ಸ್ಟೇಬಲ್(ಟ್ರಾಫಿಕ್ ಪೋಲೀಸ್ ಠಾಣೆ-ಮಲ್ಲೇಶ್ವರಂ) ರವರು ಶ್ರೀರಾಂಪುರ ಪೋಲೀಸ್ ಠಾಣೆ ಹಾಗೂ ಬಂಡಿರೆಡ್ಡಿ ವೃತ್ತದ ಹೈ ಮಾಸ್ಕ ಲೈಟ್ ಕಾರ್ಯನಿರ್ವಹಿಸುತ್ತಿಲ್ಲವೆಂದು ತಿಳಿಸಿದರು.
5. ಶ್ರೀ.ರಾಮಚಂದ್ರ, ಪೋಲೀಸ್ ಕಾನ್ಸ್ಟೇಬಲ್(ಟ್ರಾಫಿಕ್ ಪೋಲೀಸ್ ಠಾಣೆ-ಮಲ್ಲೇಶ್ವರಂ) ರವರು ಬೆಸ್ಕಂ ಅಧಿಕಾರಿಗಳಿಗೆ ಟ್ರಾಫಿಕ್ ಸಿಗ್ನಲ್ ಹತ್ತಿರ ಇರುವ ನಾಮಫಲಕದ ಮೇಲೆ ಬರುವ ಮರದ ರೆಂಬೆಗಳನ್ನು ಕತ್ತರಿಸಲು ಹೇಳಿದರು.
6. ಸುಜಾತ ಟಾಕೀಸ್ ಹತ್ತಿರ ರಸ್ತೆ ಗುಂಡಿಯನ್ನು ಮುಚ್ಚಿಸಲು ತಿಳಿಸಿದರು.
7. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡನಲ್ಲಿ ಕೋವಿಡ್ ಕೇಸ್‌ಗಳು ಕ್ರಮೇಣವಾಗಿ ಕಡಿಮೆಯಾಗುತ್ತಿರುವುದಾಗಿ ತಿಳಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೋಳ್ಳಲು ಸೂಚಿಸಿ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕರಿಗಳು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Anutalu

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂ-97

ಪ್ರತಿಯನ್ನು:

1. ಮಾನ್ಯ ಆಯುಕ್ತರ ಆಪ್ತ ಸಹಾಯಕರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರುವಂತೆ ಕೋರಿದೆ.
2. ವಿಶೇಷ ಆಯುಕ್ತರು ಆಡಳಿತ ರವರ ಅವಾಗಹನೆಗೆ ಸಲ್ಲಿಸಿದೆ.
3. ವಲಯ ಆಯುಕ್ತರು (ಪಶ್ಚಿಮ) ರವರ ಅವಾಗಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ಪಶ್ಚಿಮ) ರವರ ಅವಾಗಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿಗಳು ಹಾಗೂ ವಾರ್ಡ ಸಮಿತಿ ಅಧ್ಯಕ್ಷರು ರವರ ಅವಾಗಹನೆಗೆ ಸಲ್ಲಿಸಿದೆ.
6. ಕಛೇರಿ ಕಡತಕ್ಕೆ

Scanned with CamScanner